**DECEMMBER 14, 2025**

**AKASHAVANI - DHARWAD**

**PRADESH SAAMACHARA (KANNADA) 12 PM**

<><><>

ರಾಜಿ ಸಂಧಾನದ ಮೂಲಕ ಕಕ್ಷಿದಾರರು ತಮ್ಮ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡಲ್ಲಿ ಅನಗತ್ಯವಾಗಿ ವ್ಯರ್ಥವಾಗುವ ಹಣ ಹಾಗೂ ಸಮಯದ ಉಳಿತಾಯವಾಗುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಹರೀಶ ಎ. ಹೇಳಿದ್ದಾರೆ. ವಿಜಯಪುರದಲ್ಲಿ ಆಯೋಜಿಸಲಾದ ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಗಿದ್ದ, ಆಸ್ತಿ ವಿಭಾಗಕ್ಕೆ ಸಂಬಂಧಿಸಿದ, ಜೀವನಾಂಶ ಕೋರಿದ ಪ್ರಕರಣಗಳು, ಚೆಕ್ ಬೌನ್ಸ್, ಮೋಟಾರು ವಾಹನ ಅಪಘಾತ ಪರಿಹಾರ ಕೋರಿ ಸಲ್ಲಿಸಿದ ಪ್ರಕರಣಗಳು, ರಾಜಿಯಾಗಬಹುದಾದ ಕ್ರಿಮಿನಲ್ ಹಾಗೂ ಅಮಲ್ಜಾರಿ ಪ್ರಕರಣಗಳು ಸೇರಿದಂತೆ ಒಟ್ಟು 21 ಸಾವಿರದ 263 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಎಸ್.ಹಾಗರಗಿ ಮಾತನಾಡಿ, ಜನತಾ ನ್ಯಾಯಾಲಯದಲ್ಲಿ ರಾಜೀ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಂಡು ಪರಸ್ಪರ ಸೌಹಾರ್ದತೆಯಿಂದ ಸಮಾಜದಲ್ಲಿ ಜೀವನ ಸಾಗಿಸುವಂತೆ ಸಲಹೆ ನೀಡಿದರು. ಕೋಲಾರ ಜಿಲ್ಲೆಯಲ್ಲಿ ಆಯೋಜಿಸಲಾದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 79 ಸಾವಿರದ 569 ಪ್ರಕರಣಗಳು ವಿಲೇವಾರಿಯಾಗಿವೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ವಿಜಯಕುಮಾರ ಎಂ ಆನಂದಶೆಟ್ಟಿ ತಿಳಿಸಿದ್ದಾರೆ.

<><><>

ನೈರುತ್ಯ ರೇಲ್ವೆ, ಮೈಸೂರು ವಿಭಾಗ, ಅಖಿಲ ಭಾರತ, ಪಿಂಚಣಿ ನ್ಯಾಯಾಧಿವೇಶನವನ್ನು, ನಾಳೆ ಬೆಳಗ್ಗೆ 11 ಗಂಟೆಗೆ, ಮೈಸೂರು ವಿಭಾಗದ, ವಿಭಾಗೀಯ ರೇಲ್ವೆ ವ್ಯವಸ್ಥಾಪಕರ ಕಚೇರಿಯಲ್ಲಿ ಆಯೋಜಿಸಿದೆ. ಪಿಂಚಣಿ ಅದಾಲತ್ ಬಗ್ಗೆ, ಮಾಹಿತಿ ನೀಡಿದ, ಮೈಸೂರು ವಿಭಾಗೀಯ ಹಣಕಾಸು ವ್ಯವಸ್ಥಾಪಕ, ಪೃಥ್ವಿ ಹುಲ್ಲತ್ತಿ, ರೇಲ್ವೆ ಪಿಂಚಣಿ, ಕುಟುಂಬ ಪಿಂಚಣಿ ಮತ್ತು ಪಿಂಚಣಿದಾರರ ಅವಲಂಬಿತರು, ನ್ಯಾಯಾಧಿವೇಶನದಲ್ಲಿ ಭಾಗವಹಿಸಿ, ಪಿಂಚಣಿ ಸಂಬಂಧಿತ ಅಹವಾಲುಗಳನ್ನು ಸಲ್ಲಿಸಿ, ಪರಿಹಾರ ಪಡೆಯಬಹುದು ಎಂದು ತಿಳಿಸಿದ್ದಾರೆ. ಮೈಸೂರು ವಿಭಾಗದ ವಿಭಾಗೀಯ ರೇಲ್ವೆ ವ್ಯವಸ್ಥಾಪಕ, ಮುದಿತ್ ಮಿತ್ತಲ್ ಅಧ್ಯಕ್ಷತೆ ವಹಿಸಲಿದ್ದಾರೆ.

<><><>

ಆತ್ಮ ನಿರ್ಭರ ಭಾರತ, ಒಂದೇ ಮಾತರಂ ಗೀತೆಗೆ 150 ವರ್ಷ ಕುರಿತಾದ ಕಾರ್ಯಾಗಾರದಲ್ಲಿ, ಕೇಂದ್ರದ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ, ಪ್ರಲ್ಹಾದ ಜೋಶಿ ಪಾಲ್ಗೊಂಡಿದ್ದರು. ಧಾರವಾಡ ಜಿಲ್ಲೆ ಹುಬ್ಬಳ್ಳಿಯ, ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ, ಮಹಿಳಾ ಮೋರ್ಚಾ ಆಯೋಜಿಸಿದ್ದ, ವಿಭಾಗೀಯ ಮಟ್ಟದ ಪದಾಧಿಕಾರಿಗಳ ಸಭೆಯಲ್ಲಿ ಅವರು ಭಾಗವಹಿಸಿದ್ದರು. ಸ್ವದೇಶಿ ಉತ್ಪನ್ನಗಳ ಬಳಕೆ, ವೋಕಲ್ ಫಾರ್ ಲೋಕಲ್ ಹಾಗೂ ಆತ್ಮನಿರ್ಭರ ಭಾರತ ನಿರ್ಮಾಣದಲ್ಲಿ, ಮಹಿಳೆಯರ ಕೊಡುಗೆಗಳ ಕುರಿತು, ಚರ್ಚಿಸಿದ್ದಾಗಿ, ಸಚಿವ ಪ್ರಲ್ಹಾದ ಜೋಶಿ ಎಕ್ಸ್ ಮಾಧ್ಯಮದಲ್ಲಿ ಪ್ರಕಟಿಸಿದ್ದಾರೆ.

<><><>

ಪ್ರಧಾನಮಂತ್ರಿ ನರೇಂದ್ರ ಮೋದಿಯವರ, 9ನೇ ಆವೃತ್ತಿಯ, 'ಪರೀಕ್ಷಾ ಪೇ ಚರ್ಚಾ', 2026 ರ ಜನೆವರಿಯಲ್ಲಿ, ನಡೆಯಲಿದೆ. ಕೇಂದ್ರ ಶಿಕ್ಷಣ ಖಾತೆ ಸಚಿವ, ಧರ್ಮೇಂದ್ರ ಪ್ರಧಾನ್ ನೇತೃತ್ವದಲ್ಲಿ, ಶಿಕ್ಷಣ ಸಚಿವಾಲಯ, 'ಪರೀಕ್ಷಾ ಪೇ ಚರ್ಚಾ' ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛೆಯುಳ್ಳ, ವಿದ್ಯಾರ್ಥಿಗಳು, ಪೋ 'ಕರು ಮತ್ತು ಶಿಕ್ಷಕರನ್ನು ಆಯ್ಕೆ ಮಾಡಲಿದೆ. My Gov ಪೋರ್ಟಲ್ ನಲ್ಲಿ, 2026ರ ಜನೆವರಿ 11ರ ವರೆಗೆ, ವಿಶೇ ' ಬಹು ಆಯ್ಕೆ ಪ್ರಶ್ನೆ ಆಧಾರಿತ, ಆನ್ಲೈನ್ ಸ್ಪರ್ಧೆ

ನಡೆಯಲಿದೆ. 6 ರಿಂದ 12ನೇ ತರಗತಿ ವರೆಗಿನ ವಿದ್ಯಾರ್ಥಿಗಳು, ಅವರ ಪೋ ಕರು ಹಾಗೂ ಶಿಕ್ಷಕರು ಸ್ಪರ್ಧೆಯಲ್ಲಿ ಪಾಲ್ಗೊಳ್ಳಲು, ಅರ್ಹರು. ಹೆಸರು ನೋಂದಾಯಿಸುವ ಪ್ರತಿಯೊಬ್ಬರಿಗೂ, **My Gov** ನಿಂದ ಭಾಗವಹಿಸಿದ, ಪ್ರಮಾಣಪತ್ರ ಲಭ್ಯವಾಗಲಿದೆ ಎಂದು ಶಿಕ್ಷಣ ಸಚಿವಾಲಯ ತಿಳಿಸಿದೆ.

<><><>

ಚಾಮರಾಜನಗರ ಜಿಲ್ಲೆಯಲ್ಲಿ, ಲಿಂಗತ್ವ ಅಲ್ಪಸಂಖ್ಯಾತರ, ಮೊದಲ ಹಂತದ ಸಮೀಕ್ಷೆ ಪೂರ್ಣಗೊಂಡಿದೆ. ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ, ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳಿಗೆ, ಲಿಂಗತ್ವ ಅಲ್ಪಸಂಖ್ಯಾತರನ್ನು ಕರೆಸಿ, ಮಾಹಿತಿಯನ್ನು ಟ್ಯಾಬ್‌ನಲ್ಲಿ ಅಪ್ಲೋಡ್ ಮಾಡಲಾಗಿದೆ. ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಮಾತನಾಡಿ, 501 ಜನ ಲಿಂಗತ್ವ ಅಲ್ಪಸಂಖ್ಯಾತರು, ಸ್ವಯಂಪ್ರೇರಣೆಯಿಂದ ಹೆಸರು ನೋಂದಾಯಿಸಿದ್ದಾರೆ. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸವಲತ್ತುಗಳನ್ನು ಸದುಪಯೋಗಪಡಿಸಿಕೊಳ್ಳಲು, ಇನ್ನು ಮುಂದೆ ಅವರಿಗೆ ಸಾಧ್ಯವಾಗಲಿದೆ, ಎಂದು ಹೇಳಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ, ಸುರೇಶ ಮಾಹಿತಿ ನೀಡಿ, ಜಿಲ್ಲೆಯಲ್ಲಿ 3 ಸಾವಿರದ 19 ಜನ ಲಿಂಗತ್ವ ಅಲ್ಪಸಂಖ್ಯಾತರಿದ್ದಾರೆ. ಬಾಕಿ ಉಳಿದವರ ದಾಖಲೀಕರಣ ನಡೆಯಲಿದೆ, ಎಂದರು.

<><><>

ಕರ್ನಾಟಕ ರೈತ ಸಮೃದ್ಧಿ ಯೋಜನೆ ಅಡಿ, ಧಾರವಾಡ ಜಿಲ್ಲೆ, ಹುಬ್ಬಳ್ಳಿಯ, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ, ರೈತರಿಗಾಗಿ ಆಯೋಜಿಸಿದ್ದ, ಆರು ದಿನಗಳ ರಫ್ತು ನಿರ್ವಹಣಾ ತರಬೇತಿ ಕಾರ್ಯಾಗಾರ, ಸಂಪನ್ನ ಗೊಂಡಿತು. ಬೆಂಗಳೂರಿನ ವಿಶ್ವೇಶ್ವರಾಯ ವ್ಯಾಪಾರ ಉತ್ತೇಜನ ಕೇಂದ್ರ ಹಾಗೂ ಕೃಷಿ ಇಲಾಖೆ, ಸಹಯೋಗದಲ್ಲಿ, ರಫ್ತು ನಿರ್ವಹಣೆ ತರಬೇತಿ ಕಾರ್ಯಾಗಾರ ಜರುಗಿತು. ವಿಶ್ವೇಶ್ವರಾಯ ವ್ಯಾಪಾರ ಉತ್ತೇಜನ ಕೇಂದ್ರದ, ಧಾರವಾಡ ಘಟಕದ ಉಪ ನಿರ್ದೇಶಕ, ಟಿ.ಎಸ್. ಮಲ್ಲಿಕಾರ್ಜುನ, ಸಮಾರೋಪದಲ್ಲಿ ಮಾತನಾಡಿ, ತರಬೇತಿ ಪಡೆದ ರೈತರ ಸಾಮಾನ್ಯ ಹಾಗೂ ಮೌಲ್ಯ ವರ್ಧಿತ ಉತ್ಪನ್ನಗಳನ್ನು, ರಫ್ತು ಮಾಡಲು, ಸಂಸ್ಥೆ ಎಲ್ಲ ಹಂತದಲ್ಲಿ ಮಾರ್ಗದರ್ಶನ ಮಾಡಲಿದೆ, ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>